# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 395 (337) |
| 2. | ಮಾನ್ಯ ಸದಸ್ಯರ ಹೆಸರು : | ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| 3. | ಉತ್ತರಿಸಬೇಕಾದ ದಿನಾಂಕ : | 10.03.2025 |
| 4. | ಉತ್ತರಿಸಬೇಕಾದ ಸಚಿವರು : | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬಡವರು/ಕೆಳಮಧ್ಯಮ ವರ್ಗದ ಕುಟುಂಬಗಳ ವಿದ್ಯಾರ್ಥಿಗಳೆ ಹೆಚ್ಚಾಗಿ ಓದುವ ಬಿ.ಎಸ್.ಸಿ ನರ್ಸಿಂಗ್ ಪ್ರವೇಶದಲ್ಲಿ 'ಸೀಟ್ ಬ್ಲಾಕಿಂಗ್' ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಈ ಸಂಬಂಧ ಯಾವುದೇ ಪ್ರಕರಣ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. |
| (ಆ) | 2024-25ರಲ್ಲಿ ಹಂಚಿಕೆ ಮಾಡಿದ್ದ ಸೀಟುಗಳಲ್ಲಿ ಶೇ.50 ರಷ್ಟು ಸೀಟುಗಳು ಖಾಲಿ ಉಳಿದಿದ್ದು ಅವುಗಳನ್ನು ಖಾಸಗಿ ಕಾಲೇಜುಗಳ ಆಡಳಿತ ಮಂಡಳಿ ಅಡಿಯಲ್ಲಿ ಪ್ರವೇಶ ನೀಡಿದ್ದು, ಅರ್ಹ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡಿದಂತಲ್ಲವೆ: | 2024-25ನೇ ಸಾಲಿಗೆ ರಾಜ್ಯದಲ್ಲಿನ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿನ ಬಿ.ಎಸ್ಸಿ,. ನರ್ಸಿಂಗ್ ಸೀಟುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಸೀಟುಗಳ ಹಂಚಿಕೆ ಮತ್ತು ಶುಲ್ಕವನ್ನು ನಿಗಧಿ ಪಡಿಸಿ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 356 ಎಂಎಸ್ಎಫ್ 2024, ದಿನಾಂಕ:24.07.2024 ಮತ್ತು ಸೇರ್ಪಡೆ ಆದೇಶ ದಿನಾಂಕ:26.07.2024ರಲ್ಲಿ ಈ ಕೆಳಕಂಡಂತೆ ಸೀಟುಗಳನ್ನು ಹಂಚಿಕೆ ಮತ್ತು ಭರ್ತಿಮಾಡಿಕೊಳ್ಳುವ ಕುರಿತು ಆದೇಶಿಸಲಾಗಿದೆ:- |

| | |
|---|---|
| Government Quota Seats in Private Nursing Institutions to be filled through KEA | 20% |
| Private Quota Seats in Private Nursing Institutions to be filled through KEA | 60% |
| Management Seats(20)% to be filled directly by the Management | 20% |

2024-25ನೇ ಸಾಲಿನ ಬಿಎಸ್ಸಿ ನರ್ಸಿಂಗ್ ಕೋರ್ಸ್‌ನ ಒಟ್ಟು ಸೀಟುಗಳ ಮತ್ತು ದಾಖಲಾತಿ ವಿವರ ಈ ಕೆಳಕಂಡಂತಿದೆ.

| Course | Intake | Admitted | | Total Admitted |
|---|---|---|---|---|
| | | Government | Management | |
| B. Sc, Nursing | 38165 | 6717 | 24771 | 31488 |

| | | |
|---|---|---|
| | | 2024-25ನೇ ಸಾಲಿನ ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶಾತಿಗೆ ಕೆ.ಇ.ಎ. ವತಿಯಿಂದ ಕೌನ್ಸಿಲಿಂಗ್ ನಡೆಸಲಾಗಿದ್ದು, ಸರ್ಕಾರದ ಅಧಿಸೂಚನೆ ಸಂಖ್ಯೆ: ಎಂಇಡಿ 375 ಎಂಎಸ್‌ಎಫ್ 2024 ದಿನಾಂಕ: 29-11-2024ರಲ್ಲಿ ಕೌನ್ಸಿಲಿಂಗ್ ನಂತರ ಭರ್ತಿಯಾಗದೇ ಉಳಿಕೆಯಾಗಿದ್ದ ರಾಜ್ಯದಲ್ಲಿನ ಸರ್ಕಾರಿ ಬಿ.ಎಸ್ಸಿ. ನರ್ಸಿಂಗ್ ಕಾಲೇಜುಗಳಲ್ಲಿನ ಬಿ.ಎಸ್ಸಿ. ನರ್ಸಿಂಗ್ ಸೀಟುಗಳಿಗೆ ಕೆ.ಇ.ಎ.ಯಲ್ಲಿ ನೋಂದಾಯಿಸಿ ಕೊಂಡು ಅರ್ಹರಿದ್ದ ವಿದ್ಯಾರ್ಥಿಗಳನ್ನು ಸಿ.ಇ.ಟಿ. (C.E.T.) ನೋಂದಣಿ ಸಂಖ್ಯೆಯನ್ನು ನಮೂದಿಸಿ merit ಆಧಾರದ ಮೇಲೆ ನಿಯಮಾನುಸಾರ ಪಾರದರ್ಶಕವಾಗಿ ಪ್ರಾಂಶುಪಾಲರ ಹಂತದಲ್ಲಿ ಸರ್ಕಾರಿ ಬಿ.ಎಸ್ಸಿ. ನರ್ಸಿಂಗ್ ಕಾಲೇಜುಗಳಿಗೆ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿ ಆದೇಶಿಸಲಾಗಿದೆ. (ಅಧಿಸೂಚನೆಯ ಪ್ರತಿ ಯನ್ನು ಅನುಬಂಧದಲ್ಲಿ ಒದಗಿಸಿದೆ).<br><br>ರಾಜ್ಯ ಸರ್ಕಾರವು ಖಾಸಗಿ ನರ್ಸಿಂಗ್ ಕಾಲೇಜುಗಳ ಸಂಘದವರೊಂದಿಗೆ ಶುಲ್ಕ ನಿಗಧಿ ಹಾಗೂ ಸೀಟು ಹಂಚಿಕೆ ಕುರಿತು ಮಾಡಿಕೊಳ್ಳಲಾಗಿರುವ Consensual agreementರಲ್ಲಿ ಖಾಸಗಿ ಕಾಲೇಜುಗಳಲ್ಲಿನ ಶೇ. 20ರಷ್ಟು ಸೀಟುಗಳನ್ನು ಆಡಳಿತ ಮಂಡಳಿಯಿಂದ ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. |
| (ಇ) | ಬಹುಬೇಡಿಕೆಯ ಬಿ.ಎಸ್ಸಿ. ನರ್ಸಿಂಗ್ ಕೋರ್ಸುಗಳ ಸೀಟುಗಳು ಈ 'ಸೀಟ್ ಬ್ಲಾಕಿಂಗ್' ನಲ್ಲಿ ತೊಡಗಿರುವ ಅಧಿಕಾರಿಗಳು ಮತ್ತು ಖಾಸಗಿ ನರ್ಸಿಂಗ್ ಕಾಲೇಜುಗಳ ಆಡಳಿತ ಮಂಡಳಿಯ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ: | ಪ್ರಶ್ನೆ ಉದ್ಭವಿಸುವುದಿಲ್ಲ. |
| (ಈ) | 'ಸೀಟ್ ಬ್ಲಾಕಿಂಗ್' ಮುಖಾಂತರ ಖಾಸಗಿ ಸಂಸ್ಥೆಗಳು ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುತ್ತಿದ್ದು ಕರ್ನಾಟಕದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದ್ದು, ಇದನ್ನು ತಡೆಗಟ್ಟಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ? | ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಎಂಇಡಿ 110 ಎಂಎಸ್‌ಎಫ್ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.

ಕರ್ನಾಟಕ ಸರ್ಕಾರ

ಸಂ: ಎಂಇಡಿ 375 ಎಂಎಸ್‌ಎಫ್ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:29/11/2024

## ಅಧಿಸೂಚನೆ

ವಿಷಯ: ರಾಜ್ಯದಲ್ಲಿನ ಸರ್ಕಾರಿ ಬಿ.ಎಸ್ಸಿ. ನರ್ಸಿಂಗ್ ಕಾಲೇಜುಗಳಲ್ಲಿ ಭರ್ತಿಯಾಗದೇ ಉಳಿದಿರುವ ಬಿ.ಎಸ್ಸಿ. ನರ್ಸಿಂಗ್ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿ ಮೆರಿಟ್ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:
1. ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಏಕ ಕಡತ ಸಂಖ್ಯೆ:DME/NUR/NRC1/138/2024
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಎಂಡಿ 375 ಎಂಎಸ್‌ಎಫ್ 2024, ದಿನಾಂಕ:29.07.2024, 05.10.2024, 25.10.2024, 08.11.2024 ಮತ್ತು ದಿನಾಂಕ:26.11.2024

*****

2024-25ನೇ ಸಾಲಿನ ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ನ ಪ್ರವೇಶಾತಿಗೆ INC ರವರು ಪ್ರವೇಶಾತಿಯ ಕೊನೆಯ ದಿನಾಂಕವನ್ನು 30-11-2024ಕ್ಕೆ ನಿಗಧಿಪಡಿಸಿರುತ್ತಾರೆ. ಉಲ್ಲೇಖ (2) ರಲ್ಲಿನ ಅಧಿಸೂಚನೆಗಳನ್ವಯ ಕೆ.ಇ.ಎ. ವತಿಯಿಂದ ಕೌನ್ಸಿಲಿಂಗ್ ನಡೆಸಿದ ನಂತರ ಭರ್ತಿಯಾಗದೇ ಉಳಿಕೆಯಾಗಿರುವ ರಾಜ್ಯದಲ್ಲಿನ ಸರ್ಕಾರಿ ಬಿ.ಎಸ್ಸಿ. ನರ್ಸಿಂಗ್ ಕಾಲೇಜುಗಳಲ್ಲಿನ ಬಿ.ಎಸ್ಸಿ. ನರ್ಸಿಂಗ್ ಸೀಟುಗಳಿಗೆ ಕೆ.ಇ.ಎ.ಯಲ್ಲಿ ನೋಂದಾಯಿಸಿಕೊಂಡಿರುವ ಅರ್ಹ ವಿದ್ಯಾರ್ಥಿಗಳನ್ನು ಸಿ.ಇ.ಟಿ. (C.E.T.) ನೋಂದಣಿ ಸಂಖ್ಯೆಯನ್ನು ನಮೂದಿಸಿ merit ಆಧಾರದ ಮೇಲೆ ನಿಯಮಾನುಸಾರ ಪಾರದರ್ಶಕವಾಗಿ ಪ್ರಾಂಶುಪಾಲರ ಹಂತದಲ್ಲಿ ಸರ್ಕಾರಿ ಬಿ.ಎಸ್ಸಿ. ನರ್ಸಿಂಗ್ ಕಾಲೇಜುಗಳಿಗೆ ಭರ್ತಿಮಾಡಿಕೊಳ್ಳಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

29/11/24

(ಶಿವಲಿಂಗಪ್ರಭು ವಾಲಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ವೈದ್ಯಕೀಯ ಶಿಕ್ಷಣ ಇಲಾಖೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)
ಪತ್ರ ಸ್ವೀಕರಿಸಿದ ಶಾಖೆ - ಪತ್ರ ಸ್ವೀಕೃತಿ
ದಿನಾಂಕ 30/11/24

**ಇವರಿಗೆ:**

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560 009.
2. ಕಾರ್ಯನಿರ್ವಹಣಾ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.

--2...

3. ರಾಜ್ಯದ ಎಲ್ಲಾ ಸರ್ಕಾರಿ ಬಿ.ಎಸ್ಸಿ ನರ್ಸಿಂಗ್ ಕಾಲೇಜುಗಳ ಪ್ರಾಂಶುಪಾಲರಿಗೆ (ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಮೂಲಕ)
4. ರಿಜಿಸ್ಟ್ರಾರ್, ಕರ್ನಾಟಕ ನರ್ಸಿಂಗ್ ಕೌನ್ಸಿಲ್, ಬೆಂಗಳೂರು
5. ಕಾರ್ಯದರ್ಶಿ, ಕರ್ನಾಟಕ ಶುಶ್ರೂಷಾ ಪರೀಕ್ಷಾ ಮಂಡಳಿ, ಬೆಂಗಳೂರು
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.